**ಅಫ್ಘಾನಿಸ್ತಾನದ ಮೇಲೆ ಪಾಕಿಸ್ತಾನದ ಇತ್ತೀಚಿನ ದಾಳಿಗಳ ಬಗ್ಗೆ ಮಾಧ್ಯಮ ಪ್ರಶ್ನೆಗಳಿಗೆ ಅಧಿಕೃತ ವಕ್ತಾರರ ಪ್ರತಿಕ್ರಿಯೆ**

ಮಾರ್ಚ್ 14, 2026

ಅಫ್ಘಾನಿಸ್ತಾನದ ಮೇಲೆ ಪಾಕಿಸ್ತಾನ ನಡೆಸಿದ ಇತ್ತೀಚಿನ ದಾಳಿಗಳ ಕುರಿತು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆಯಾಗಿ, ಅಧಿಕೃತ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ:

ಅಫ್ಘಾನಿಸ್ತಾನದ ಭೂ ಪ್ರದೇಶದಲ್ಲಿ ಹಲವಾರು ನಾಗರಿಕರ ಸಾವಿಗೆ ಕಾರಣವಾದ ಮತ್ತು ನಾಗರಿಕ ಮೂಲಸೌಕರ್ಯವನ್ನು ನಾಶಪಡಿಸಿದ ಪಾಕಿಸ್ತಾನ ನಡೆಸಿದ ವಾಯು ದಾಳಿಯನ್ನು ಭಾರತ ಖಂಡಿಸುತ್ತದೆ. ಇದು ಸಾರ್ವಭೌಮ ಅಫ್ಘಾನಿಸ್ತಾನದ ಕಲ್ಪನೆಗೆ ವಿರೋಧ ಹೊಂದಿರುವ ಪಾಕಿಸ್ತಾನದ ವ್ಯವಸ್ಥೆ ನಡೆಸಿದ ಮತ್ತೊಂದು ಆಕ್ರಮಣಕಾರಿ ಕೃತ್ಯವಾಗಿದೆ. ಅಫ್ಘಾನಿಸ್ತಾನದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯನ್ನು ಸಂಪೂರ್ಣವಾಗಿ ಗೌರವಿಸಬೇಕು ಎಂದು ಭಾರತ ಪುನರುಚ್ಚರಿಸುತ್ತದೆ.

ನವದೆಹಲಿ

ಮಾರ್ಚ್ 14, 2026